159ಇ ಅ
(53)

**ಮಾನ್ಯ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾದ ಶ್ರೀ ಬಿ.ಎಸ್. ಶಿವಣ್ಣ ಇವರು ನಿಯಮ 72ರಡಿ ಗಮನ ಸೆಳೆಯುವ ಸೂಚನೆಯಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಸರ್ಕಾರದ ಉತ್ತರ:**

**:ಪ್ರಶ್ನೆ:**

ಇಂದಿನ ಡಿಜಿಟಲ್ ಶಿಕ್ಷಣ ಯುಗದಲ್ಲಿ ರಾಜ್ಯದ ಬಿ.ಪಿ.ಎಲ್ (BPL) ಕುಟುಂಬಗಳ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಉಚಿತ ಲ್ಯಾಪ್ ಟ್ಯಾಪ್/ಗಣಕಯಂತ್ರ ಒದಗಿಸುವುದು, ಸರ್ಕಾರಿ ಕಾಲೇಜುಗಳಲ್ಲಿ ಡಿಜಿಟಲ್ ಸೌಲಭ್ಯ ಕಲ್ಪಿಸುವುದು ಹಾಗೂ ಶಾಸಕರ ಪ್ರದೇಶಾಭಿವೃದ್ಧಿ (LADP) ನಿಧಿಯಿಂದ ವಿದ್ಯಾರ್ಥಿಗಳಿಗೆ ಲ್ಯಾಪ್ ಟ್ಯಾಪ್ ನೀಡಲು ಮಾರ್ಗಸೂಚಿ ಸಡಿಲಿಸಬೇಕೆನ್ನುವ ವಿಷಯದ ಕುರಿತು.

**:ಉತ್ತರ:**

2016-17 ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ಪ್ರವೇಶ ಪಡೆದ ಮತ್ತು ಕೌಟುಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆ ಇದ್ದ ಒಟ್ಟು 24363 ಎಸ್.ಸಿ./ಎಸ್.ಟಿ. ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ.

2019-20ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ಪ್ರವೇಶ ಪಡೆದ ಮತ್ತು ಕೌಟುಂಬಿಕ ವಾರ್ಷಿಕ ಆದಾಯ ರೂ. 2.50 ಲಕ್ಷಗಳಿಗಿಂತ ಕಡಿಮೆಯಿದ್ದ ಒಟ್ಟು 109916 ಎಲ್ಲಾ ವರ್ಗಗಳ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗಿದೆ.

2020-21ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ, ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಥಮ, ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಥಮ, ದ್ವಿತೀಯ, ತೃತೀಯ ವರ್ಷದ ಒಟ್ಟು 1.55 ಲಕ್ಷ ವಿದ್ಯಾರ್ಥಿಗಳಿಗೆ ಡಿಜಿಟಲ್ ಕಲಿಕೆ ಯೋಜನೆಯ ಅಂಗವಾಗಿ ಉಚಿತ ಟ್ಯಾಬ್ಲೆಟ್ ಪಿ.ಸಿ.ಗಳನ್ನು ವಿತರಿಸಲಾಗಿದೆ.

2020-21ನೇ ಸಾಲಿನಲ್ಲಿ 414 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2500 ಸ್ಮಾರ್ಟ್ ತರಗತಿಗಳನ್ನು ಸ್ಥಾಪಿಸಲಾಗಿದೆ. 2021-22ನೇ ಸಾಲಿನಲ್ಲಿ 420 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ, 104 ಸರ್ಕಾರಿ ಪಾಲಿಟೆಕ್ನಿಕ್ ಹಾಗೂ 14 ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಒಟ್ಟು 6500 ಸ್ಮಾರ್ಟ್ ತರಗತಿಗಳನ್ನು ಸ್ಥಾಪಿಸಲಾಗಿದ್ದು, ಒಟ್ಟು 9000 ಸ್ಮಾರ್ಟ್ ತರಗತಿಗಳನ್ನು ಸ್ಥಾಪಿಸಲಾಗಿದೆ.

ತಾಂತ್ರಿಕ ಶಿಕ್ಷಣ ಇಲಾಖೆಯಡಿ ಮಹತ್ವಾಕಾಂಕ್ಷೆ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 38 ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2023-24 ನೇ ಸಾಲಿನಲ್ಲಿ ಪ್ರಥಮ ವರ್ಷಕ್ಕೆ ಪ್ರವೇಶ ಪಡೆದು ವ್ಯಾಸಾಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳಿಗೆ 2024-25 ನೇ ಆರ್ಥಿಕ ಸಾಲಿನಲ್ಲಿ ಒಟ್ಟು 1243 ಲ್ಯಾಪ್ ಟಾಪ್ ಗಳನ್ನು ವಿತರಿಸಲಾಗಿದೆ.

ಕಾಲೇಜು ಶಿಕ್ಷಣ ಇಲಾಖೆಯ "ವಿಜಯೀಭವ" ಯುಟ್ಯೂಬ್ ಚಾನಲ್ ಮೂಲಕ ಸ್ಪರ್ಧಾತ್ಮಕ ತರಗತಿಗಳಿಗೆ ತಯಾರಿ ನಡೆಸಲು ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಅಧ್ಯಯನ ಸಾಮಗ್ರಿಗಳನ್ನು ನೀಡಲಾಗುತ್ತಿದೆ.

ಪ್ರಸ್ತುತ ಸಾಲಿನಲ್ಲಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಬಿ.ಪಿ.ಎಲ್ (BPL) ಕುಟುಂಬಗಳ ಪ್ರತಿಭಾಂತ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್ ಟಾಪ್ ವಿತರಣೆಯ ಯಾವುದೇ ಯೋಜನೆ ಇರುವುದಿಲ್ಲ.

ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ(LADP-Local Area Devolopment Programme) ಮಾರ್ಗಸೂಚಿಯನ್ವಯ ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ನೀಡಲು ಉನ್ನತ ಶಿಕ್ಷಣ ಇಲಾಖೆಯಲ್ಲಿ ಯಾವುದೇ ಯೋಜನೆಗಳಿರುವುದಿಲ್ಲ.

ಕಡತ ಸಂಖ್ಯೆ: ಇಡಿ 94 ಹೆಚ್‌ಪಿಟಿ 2026

(ಬಸವರಾಜ ರಾಯರಡ್ಡಿ)
ಉನ್ನತ ಶಿಕ್ಷಣ ಸಚಿವರು